**ಸಾಕ್ಷಿಗೆ ದಿನಾಂಕಃ 17.09.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಂದುವರಿದ ಮುಖ್ಯ ವಿಚಾರಣೆ: ಅರ್ಜಿದಾರರ ಪರ ವಕೀಲರಾದ Kum.Mahalakshmi ರವರಿಂದಃ**

1) **ಪ್ರಥಮ ವರ್ತಮಾನ ವರದಿ** ಹಾಜರುಪಡಿಸಿದ್ದು ಅದನ್ನು **ನಿ.ಪಿ.1** ಎಂದು**, ಪೋಲಿಸರಿಗೆ ನೀಡಿರುವ ದೂರನ್ನು ನಿ.ಪಿ.2** ಎಂದು**, ಸ್ಥಳ ಪಂಚನಾಮೆಯನ್ನು** ನಿ.ಪಿ.**3** ಎಂದು**, ಕಚ್ಚಾ ನಕ್ಷೆಯನ್ನು** ನಿ.ಪಿ.**4** ಎಂದು**, ಐ.ಎಂ.ವಿ ಕಾಯ್ದೆ ಕಲಂ 133** ರ ಅಡಿಯಲ್ಲಿ ನೀಡಿರುವಂತಹ **ನೋಟಿಸ್** ಅನ್ನು ನಿ.ಪಿ.**5** ಎಂದು ಮತ್ತು **ಆ ನೋಟಿಸಿಗೆ ನೀಡಿರುವಂತಹ ಉತ್ತರವನ್ನು** ನಿ.ಪಿ.**6** ಎಂದು**, ಗಾಯದ ಪ್ರಮಾಣ ಪತ್ರವನ್ನು** ನಿ.ಪಿ.**7** ಎಂದು**,** ಮತ್ತು ಅಂತಿಮ ವರದಿಯನ್ನು ನಿ.ಪಿ.**8** ಎಂದು ಗುರುತಿಸಿದೆ.

   **ಸೂಚನೆಃ** ನಿ.ಪಿ.1 ರಿಂದ ನಿ.ಪಿ.8 ಎಂದು ಗುರುತು ಆಗಿರುವ ದಾಖಲೆಗಳು ರಾಮನಗರ ಸಂಚಾರಿ ಪೋಲಿಸ್ ಠಾಣೆಯವರು ನೀಡಿರುವಂತಹ ಯಥಾ ನಕಲುಗಳು ಆಗಿವೆ.

2) **ಡಿಸ್ಚಾರ್ಜ್ ಸಮ್ಮರಿ ಅನ್ನು** ನಿ.ಪಿ.**9** ಎಂದು ಗುರುತಿಸಿದೆ.

3) ಒಟ್ಟು **29** ಮೆಡಿಕಲ್ ಬಿಲ್ಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಒಟ್ಟಾಗಿ ನಿ.ಪಿ.**10** ಎಂದು ಗುರುತಿಸಿದೆ.

4) ಈಗ ಸಾಕ್ಷಿದಾರರು ತಮ್ಮ ಮೂಲ ಆಧಾರ್ ಕಾರ್ಡ್ ದಾಖಲೆ ಮತ್ತು ಇದೇ ದಾಖಲೆಯ ಫೋಟೋ ಪ್ರತಿಯನ್ನು ಹಾಜರುಪಡಿಸಿದ್ದಾರೆ. ಸದರಿ ಮೂಲ ಪ್ರತಿಯನ್ನು ಮತ್ತು ಫೋಟೋ ಪ್ರತಿಯನ್ನು ಹೋಲಿಕೆ ಮಾಡಿ ನೋಡಲಾಗಿ ಈ ಮೂಲ ದಾಖಲೆಯನ್ನು ಆಧಾರವಾಗಿ ಇಟ್ಟುಕೊಂಡು ಯಾಂತ್ರಿಕ ಸಹಾಯದಿಂದ ಈ ಫೋಟೋ ಪ್ರತಿಯನ್ನು ಸಿದ್ಧಪಡಿಸಿದ್ದಾರೆ ಎಂದು ಕಂಡು ಬರುತ್ತದೆ. ಆದ ಕಾರಣದಿಂದ ಸದರಿ ಫೋಟೋ ಪ್ರತಿಯನ್ನು ನಿ.ಪಿ.**11** ಎಂದು ಗುರುತಿಸಿದೆ ಮತ್ತು ಮೂಲ ದಾಖಲೆಯನ್ನು ಈ ಸಾಕ್ಷಿದಾರರಿಗೆ ವಾಪಸ್ಸು ನೀಡಿದೆ.

5) ಆದ ಕಾರಣದಿಂದ ಪ್ರಾರ್ಥನೆಯಂತೆ ನನಗೆ ಪರಿಹಾರವನ್ನು ನೀಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**<u>ಪಾಟೀ ಸವಾಲು ಕೋರಿಕೆಯ ಮೇರೆಗೆ ಮುಂದೂಡಲಾಯಿತು.</u>**

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ)

**(ಓ.ಹೇ.ಕೇ.ಸ.ಇ)**

**ಮುಖ್ಯ ನ್ಯಾಯಾಧೀಶರು,**
ಲಘು ವ್ಯವಹಾರಗಳ ನ್ಯಾಯಾಲಯ,
ಬೆಂಗಳೂರು.